ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 26-10-2016

## ಪತ್ರಿಕಾ ಆಮಂತ್ರಣ

1. **ಪತ್ರಿಕಾಗೋಷ್ಠಿ:**
   **ಕೆ. ಆರ್. ರಮೇಶ್ ಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.**
   **ದಿನಾಂಕ: 27–10–2016 ಗುರುವಾರ, ಬೆಳಿಗ್ಗೆ 11–00 ಗಂಟೆಗೆ**
   **ಸ್ಥಳ : ಕೊಠಡಿ ಸಂಖ್ಯೆ: 317, ವಿಕಾಸಸೌಧ, ಬೆಂಗಳೂರು.**

2. **ರಾಜ್ಯದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ವತಿಯಿಂದ ಸಾಹಸ ಕ್ರೀಡಾಪಟುಗಳಿಗೆ ನಗದು ಪ್ರಶಸ್ತಿ ಪುರಸ್ಕಾರ ಪ್ರದಾನ ಸಮಾರಂಭ.**
   **ದಿನಾಂಕ: 27–10–2016 ಗುರುವಾರ, ಮಧ್ಯಾಹ್ನ – 3–00 ಗಂಟೆ**
   **ಸ್ಥಳ: ರಾಜ್ಯ ಯುವ ಕೇಂದ್ರ, ಯವನಿಕಾ, ನೃಪತುಂಗ ರಸ್ತೆ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

# ಕೆರೆ ಒತ್ತುವರಿ: ಡಿಸೆಂಬರ್ ಅಂತ್ಯದೊಳಗೆ ಸದನ ಸಮಿತಿ ವರದಿ ಮಂಡನೆ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಕೆರೆ ಒತ್ತುವರಿ ಕುರಿತ ವರದಿಯನ್ನು ಡಿಸೆಂಬರ್ ಅಂತ್ಯದೊಳಗೆ ಮಂಡಿಸಲಾಗುವುದು ಎಂದು ವಿಧಾನ ಸಭಾಧ್ಯಕ್ಷ ಹಾಗೂ ವಿಧಾನಮಂಡಲದ ಕೆರೆ ಒತ್ತುವರಿ ಸದನ ಸಮಿತಿ ಅಧ್ಯಕ್ಷರೂ ಆದ ಕೆ.ಬಿ. ಕೋಳಿವಾಡ ಅವರು ತಿಳಿಸಿದ್ದಾರೆ.

ಅವರು ಇಂದು ತಮ್ಮ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಅವರು ಕೆರೆ ಕುಂಟೆ ಒತ್ತುವರಿ, ಬಫರ್‌ಜೋನ್ ಒತ್ತುವರಿ ಹಾಗೂ ರಾಜಕಾಲುವೆ ಒತ್ತುವರಿ ಅಂತಿ ವರದಿಗಳನ್ನು ಮೂರು ತಿಂಗಳ ಒಳಗಾಗಿ ಮಂಡಿಸಲಾಗುವುದು ಎಂದು ತಿಳಿಸಿದರು.

ಸದನ ಸಮಿತಿಯು ಕೆರೆ ಒತ್ತುವರಿ ಕುರಿತು ಸಂಪೂರ್ಣ ಮಾಹಿತಿ ಕಲೆ ಹಾಕಿದ್ದು, ಮಾಹಿತಿ ಸಂಗ್ರಹಿಸುವ ಕಾರ್ಯ ಪೂರ್ಣಗೊಂಡಿದೆ. ಈವರೆಗೆ 10,787 ಎಕರೆಯಷ್ಟು ಕೆರೆಗಳ ಒತ್ತುವರಿಯಾಗಿದ್ದು ಇದರ ಅಂದಾಜು ಮೌಲ್ಯ 1.5 ಲಕ್ಷ ಕೋಟಿ ಆಗಲಿದೆ ಎಂದರು.

ಕೆರೆ ಕುಂಟೆ ಒತ್ತುವರಿಯಲ್ಲಿ ಸರ್ಕಾರಿ ಒತ್ತುವರಿ 277 ಎಕರೆ, ಖಾಸಗಿ ಒತ್ತುವರಿ 782 ಎಕರೆಯಾಗಿದ್ದು ಇದರ ಅಂದಾಜು ಮೌಲ್ಯ 16,500 ಕೋಟಿ ಎಂದು ತಿಳಿಸಿದರು.

ಬೆಂಗಳೂರು ನಗರದಲ್ಲಿ 501 ಎಕರೆ 11 ಗುಂಟೆ ರಾಜಕಾಲುವೆ ಒತ್ತುವರಿಯಾಗಿದ್ದು, 348 ಗ್ರಾಮಗಳಲ್ಲಿ ಅದರ ಉದ್ದ 1090 ಕಿ.ಮಿ.ಗಳಷ್ಟಿದ್ದು ಒತ್ತುವರಿದಾರರ ಸಂಖ್ಯೆ 2083 ಆಗಿದೆ. ಇದರ ಅಂದಾಜು ಮೌಲ್ಯ 11 ಸಾವಿರ ಕೋಟಿ ರೂ. ಎಂದು ತಿಳಿಸಿದರು.

ಕೆರೆಗಳ ಸುತ್ತ ಬಫರ್‌ಜೋನ್ ಒತ್ತುವರಿ ಪ್ರದೇಶದಲ್ಲಿ 1,16,988 ಕಟ್ಟಡಗಳಿದ್ದು ಅವುಗಳ ಅಂದಾಜು ಮೌಲ್ಯ 11,498 ಕೋಟಿ ರೂ.ಗಳು. ರಾಜಕಾಲುವೆ ಬಫರ್ ಜೋನ್ ಒತ್ತುವರಿ ಪ್ರದೇಶದಲ್ಲಿ 1,34,786 ಕಟ್ಟಡಗಳಿದ್ದು, ಅವುಗಳ ಅಂದಾಜು ಬೆಲೆ 13,479 ಕೋಟಿ ರೂ.ಗಳು ಎಂದು ತಿಳಿಸಿದರು. ಮುಂದಿನ ಮೂರು ತಿಂಗಳಿನೊಳಗಾಗಿ ಸದನ ಸಮಿತಿಯ ಅಂತಿಮ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

## ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆದವರ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 18–09–2016 ರಂದು ನಡೆಸಿದ ಕರ್ನಾಟಕ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಒಟ್ಟು 25 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳ ನೋಂದಣಿ ಸಂಖ್ಯೆಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಮುಖ್ಯ ಪರೀಕ್ಷೆಗೆ ಅರ್ಹರಾಗಿರುವ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಮತ್ತೊಮ್ಮೆ ಅರ್ಜಿ ಸಲ್ಲಿಸುವಂತಿಲ್ಲ. ಆದರೆ ಮುಖ್ಯ ಪರೀಕ್ಷೆಗೆ ನಿಗದಿತ ಪರೀಕ್ಷಾ ಶುಲ್ಕವನ್ನು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ ರೂ. 300/- ಹಾಗೂ ಇತರೆ ಅಭ್ಯರ್ಥಿಗಳಿಗೆ ರೂ. 500/-) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು – 01. ಇವರ ಹೆಸರಿಗೆ ಐಪಿಓ ಅಥವಾ ಡಿಡಿಯನ್ನು ಪಡೆಯತಕ್ಕದ್ದು.

ಸದರಿ ಐಪಿಓ/ಡಿಡಿಯನ್ನು ಮನವಿಯೊಂದಿಗೆ ಆಯೋಗದ ಕೇಂದ್ರ ಕಚೇರಿ, ಉದ್ಯೋಗಸೌಧ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು – 560 001. ಈ ವಿಳಾಸಕ್ಕೆ ನವೆಂಬರ್ 16 ರೊಳಗಾಗಿ ತಲುಪುವಂತೆ ಖುದ್ದಾಗಿ ಅಥವಾ ಅಂಚೆ ಮೂಲಕ ರವಾನಿಸತಕ್ಕದ್ದು.

ನಿಗದಿತ ಪರೀಕ್ಷಾ ಶುಲ್ಕವನ್ನು ಪಾವತಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸಾಹಸ ಕ್ರೀಡಾಪಟುಗಳಿಗೆ ನಗದು ಪ್ರಶಸ್ತಿ ಪುರಸ್ಕಾರ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಹಸ ಕ್ರೀಡಾ ಸಾಧನೆ ಮಾಡಿದ ಸಾಹಸ ಕ್ರೀಡಾಪಟುಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಂಡಿದೆ.

ಕಾರ್ಯಕ್ರಮವನ್ನು ಅಕ್ಟೋಬರ್ 27 ರಂದು ಮಧ್ಯಾಹ್ನ 3-00 ಗಂಟೆಗೆ ರಾಜ್ಯ ಯುವ ಕೇಂದ್ರದ ಯವನಿಕಾದಲ್ಲಿ ನಡೆಯುತ್ತದೆ. 20 ಮತ್ತು 21 ನೇ ರಾಷ್ಟ್ರೀಯ ಸ್ಪೋರ್ಟ್ ಕ್ಲೈಂಬಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿ ಪದಕ ವಿಜೇತರಿಗೆ ನಗದು ಪ್ರಶಸ್ತಿ ಪುರಸ್ಕಾರವನ್ನು ದೇಶದಲ್ಲೇ ಪ್ರಪ್ರಥಮ ಬಾರಿಗೆ ಕರ್ನಾಟಕ ಸರ್ಕಾರ ನೀಡುತ್ತಿದೆ.

ಸತತವಾಗಿ 15 ಬಾರಿ ರಾಷ್ಟ್ರೀಯ ಚಾಂಪಿಯನ್‌ಶಿಪ್ ಪಂದ್ಯಾವಳಿ ಗೆದ್ದಿರುವ ಕೀರ್ತಿ ದಕ್ಷಿಣವಲಯ ಕ್ರೀಡಾಪಟುಗಳಿಗೆ ದೊರಕಿದ್ದು, ಇಲ್ಲಿರುವ ಸಾಹಸ ಕ್ರೀಡಾಪಟುಗಳು

ಕರ್ನಾಟಕದವರೇ ಆಗಿದ್ದಾರೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ಬಹುತೇಕ ಪದಕಗಳನ್ನು ಕರ್ನಾಟಕದ ಸಾಹಸ ಕ್ರೀಡಾಪಟುಗಳು ಈ ಕ್ರೀಡೆಯಲ್ಲಿ ವಿಜೇತರಾಗಿದ್ದಾರೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ 83 ದೇಶಗಳು ಈ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವುದು ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಈ ಕ್ರೀಡೆಯು ಬಹು ಜನಪ್ರಿಯತೆಯನ್ನು ಪಡೆದಿರುತ್ತದೆ. ಈ ಕ್ರೀಡೆಯನ್ನು ಏಷಿಯಾನ್ ಗ್ರೇಮ್ಸ್ – 2018 ರ ಕ್ರೀಡಾಕೂಟದಲ್ಲಿ ಹಾಗೂ 2020 ಒಲಂಪಿಕ್ ಗೇಮ್ಸ್‌ನಲ್ಲಿ ಸೇರಿಸಲಾಗಿದೆ.

**ಸಾಹಸ ಕ್ರೀಡಾ ಪ್ರಶಸ್ತಿ ವಿಜೇತರು:**

ಪಿ.ಹೆಚ್. ಶಾಂತಿ ರಾಣಿದೇವಿ, ಪ್ರವೀಣ ಸಿ.ಎಂ, ಶಿವಲಿಂಗ ಎಂ, ಚೆ ಎಮಿೀಲಿಯಾ ಸಿಎಚ್ ಮಾರಕ್, ನೇಹಾ ಪ್ರಕಾಶ್, ಸ್ಮೃತಿ ಸಿಂಗ್, ಭರತ್ ಪೆರಿಯಾರ್, ಲೋಕೇಶ್ ರಾಜನ್, ನೇತ್ರಾಚಾರ್ ಭಟ್, ಪೌಶಿ ಶ್ರೀಧರ್, ಜಯತಿ ಗಡಂಸೆಟ್ಟಿ, ಇಷಾ ಚಿನ್ನಯ್ಯ, ಅನ್ಯ ಸೀತಾ ಚಿನ್ನಯ್ಯ, ಪೂರ್ವಿ ರಾಜಪುರೋಹಿತ್, ಪ್ರತೀಕ್ಷಾ ಅರುಣ, ಮಣಿಗಂಡನ್, ಸಾಧ್ವಿ ಪ್ರೇಮ್ ಕುಕ್ರೇಜ್ ಹಾಗೂ ಅರ್ಜುನ್.

ಎಸ್‌ಎಂ:ಜೆಡಿ:ಜಿಪಿಆರ್.

# <u>ಅಂತಿಮ ಆಯ್ಕೆಪಟ್ಟಿ ಪ್ರಕಟ</u>

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕದ ವಿವಿಧ ಇಲಾಖೆಗಳಲ್ಲಿನ 2226 ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಅಕ್ಟೋಬರ್ 24 ರಂದು ಆಯೋಗದ ಅಂತರ್ಜಾಲ ತಾಣ http://kpsc.kar.nic.in ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎಸ್‌ಎಂ:ಜಿಪಿಆರ್.

# <u>ಅಂತಿಮ ಆಯ್ಕೆಪಟ್ಟಿ ಪ್ರಕಟ</u>

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕದ ವಿವಿಧ ಇಲಾಖೆಗಳಲ್ಲಿನ 2314 ಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಅಕ್ಟೋಬರ್ 24 ರಂದು ಆಯೋಗದ ಅಂತರ್ಜಾಲ ತಾಣ http://kpsc.kar.nic.in. home ನಲ್ಲಿ selection list ಅಡಿಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎಸ್‌ಎಂ:ಜಿಪಿಆರ್.

# ವಾಹನ ನಿರೀಕ್ಷಕರ ನೇಮಕಾತಿಗಾಗಿ ದೈಹಿಕ ದಾರ್ಢ್ಯತೆ ಪರೀಕ್ಷೆ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಸಾರಿಗೆ ಇಲಾಖೆಯಲ್ಲಿನ ಮೋಟಾರು ವಾಹನ ನಿರೀಕ್ಷಕರ 127=23 (ಹೈ.ಕ) = 150 ಹುದ್ದೆಗಳ ನೇಮಕಾತಿಗಾಗಿ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳಿಗೆ ದೈಹಿಕ ದಾರ್ಢ್ಯತೆ ಪರೀಕ್ಷೆಯನ್ನು ಹಮ್ಮಿಕೊಂಡಿದೆ.

ಪರೀಕ್ಷೆಯು ನವೆಂಬರ್ 3 ರಿಂದ 5 ರವರೆಗೆ ಬೆಳಿಗ್ಗೆ 9–00 ಮತ್ತು 1–30 ಗಂಟೆ ಕ್ರಮ ಸಂಖ್ಯೆ 1 ರಿಂದ 140 ರವರೆಗೆ ಸಾರ್ವಜನಿಕ ಆಸ್ಪತ್ರೆ, ಜಯನಗರ, 4ನೇ "ಟಿ' ಬ್ಲಾಕ್, ಬೆಂಗಳೂರು – 41 ಮತ್ತು ಕ್ರಮ ಸಂಖ್ಯೆ 141 ರಿಂದ 279 ರವರೆಗೆ ಕೆ.ಸಿ. ಜನರಲ್ ಆಸ್ಪತ್ರೆ, ಮಲ್ಲೇಶ್ವರಂ, ಬೆಂಗಳೂರು – 03 ರಲ್ಲಿ ನಡೆಯಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಆಹ್ವಾನಿಸಲಾದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ಅಂತರ್ಜಾಲ ತಾಣದಲ್ಲಿ ಪ್ರಕಟಿಸಿದ್ದು, ಸಂಬಂಧಿತರಿಗೆ ಎಸ್.ಎಂ.ಎಸ್/ಇ–ಮೇಲ್ ಮೂಲಕವೂ ಸಹ ಮಾಹಿತಿ ನೀಡಲಾಗಿದೆ.

ಸದರಿ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in" ನಲ್ಲಿ ನೋಡಬಹುದಾಗಿದೆ. ಸೂಚನಾಪತ್ರ ತಲುಪದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳು ದೈಹಿಕ ದಾರ್ಢ್ಯತೆ ಪರೀಕ್ಷೆ ಮುನ್ನ ಆಯೋಗದ ಕೇಂದ್ರ ಕಚೇರಿಯಿಂದ ಮಾಹಿತಿಯ ಪಡೆಯಬೇಕು ಎಂದು ಕರ್ನಾಟಕ ಲೋಕಸೇವಾ ಆಯೋಗವು ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಂ:ಜಿಪಿಆರ್.

# ಕರ್ನಾಟಕ ರಾಜ್ಯೋತ್ಸವ ಮತ್ತು ಮಕ್ಕಳ ಮೇಳ – 2016

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಸಾರ್ವಜನಿಕ ಶಿಕ್ಷಣ ಇಲಾಖೆ ಕರ್ನಾಟಕ ರಾಜ್ಯೋತ್ಸವ ಸಮಾರಂಭವನ್ನು ನವೆಂಬರ್ 1 ರಂದು ಬೆಳಿಗ್ಗೆ 9–00 ಗಂಟೆಗೆ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ತನ್ವೀರ್ ಸೇಠ್ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.  ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯ ಪಿ.ಸಿ. ಮೋಹನ್ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಬೆಂಗಳೂರು ನಗರ ಜಿಲ್ಲೆಯ ಶಾಲಾ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮವನ್ನು ಪ್ರಸ್ತುತ ಪಡಿಸುವರು.

ಎಸ್‌ಎಂ:ಜೆಡಿ;ಜಿಪಿಆರ್.

# ಜಾಗೃತಿ ಅರಿವಿನ ಸಪ್ತಾಹ – 2016

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಜಾಗೃತಿ ಅರಿವಿನ ಸಪ್ತಾಹದ ಅಂಗವಾಗಿ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳ ಅಧಿಕಾರಿ/ನೌಕರರಿಗೆ ನವೆಂಬರ್ 3 ರಂದು ಬೆಳಿಗ್ಗೆ 11–000 ಗಂಟೆಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಜ್ಞಾ ವಚನವನ್ನು ಬೋಧಿಸಲಿದ್ದಾರೆ.

ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ಅಕ್ಟೋಬರ್ 31 ರಿಂದ ನವೆಂಬರ್ 5 ರವರೆಗೆ "ಜಾಗೃತಿ ಅರಿವಿನ ಸಪ್ತಾಹ – 2016" ಕೇಂದ್ರ ವಿಚಕ್ಷಣ ಆಯೋಗವು ಹಮ್ಮಿಕೊಂಡಿದೆ. ಆಯೋಗವು ಎಲ್ಲಾ ರಾಜ್ಯಗಳಿಗೆ "ಜಾಗೃತಿ ಅರಿವಿನ ಸಪ್ತಾಹ – 2016" ಆಚರಿಸುವಂತೆ ಸೂಚನೆ ನೀಡಿದ್ದು, ಈ ವರ್ಷ **"ಪ್ರಾಮಾಣಿಕತೆಯನ್ನು ಪ್ರೋತ್ಸಾಹಿಸುವ ಮೂಲಕ ಭ್ರಷ್ಟಾಚಾರ ನಿರ್ಮೂಲನೆ ಮಾಡುವಲ್ಲಿ ಸಾರ್ವಜನಿಕರ ಪಾಲ್ಗೊಳ್ಳುವಿಕೆ"** ವಿಷಯವನ್ನು ಆಯ್ದುಕೊಳ್ಳಲಾಗಿದೆ.

ಈ ಜಾಗೃತಿ ಅರಿವಿನ ಸಪ್ತಾಹವನ್ನು ಪರಿಣಾಮಕಾರಿಯಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರ ಎಲ್ಲಾ ಇಲಾಖೆಗಳಿಗೆ ಸೂಚನೆ ನೀಡಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಎಂ.ಬಿ. ಸಿಂಗ್ ನಿಧನಕ್ಕೆ ಸಂತಾಪ

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ)

ಹಿರಿಯ ಪತ್ರಕರ್ತ ಹಾಗೂ ಪ್ರಜಾವಾಣಿ ಮತ್ತು ಸುಧಾ ಪತ್ರಿಕೆಗಳ ಮಾಜಿ ಸಂಪಾದಕ ಎಂ.ಬಿ. ಸಿಂಗ್ ಅವರ ನಿಧನಕ್ಕೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಪತ್ರಿಕೋದ್ಯಮಕ್ಕೆ ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದ ಎಂ.ಬಿ. ಸಿಂಗ್ ಅವರು ನೂರಾರು ಕಿರಿಯ ಪತ್ರಕರ್ತರುಗಳಿಗೆ ಮಾರ್ಗದರ್ಶಕರಾಗಿ ಹಾಗೂ ಪತ್ರಿಕೋದ್ಯಮಕ್ಕೆ ಹೊಸ ಆಯಾಮ ತಂದು ಕೊಡುವಲ್ಲಿ ಶ್ರಮಿಸಿದ್ದಾರೆ. ಪತ್ರಿಕೋದ್ಯಮ ಜೊತೆ ಜೊತೆಯಲ್ಲಿ ಹಲವು ಸಂಘ ಸಂಸ್ಥೆಗಳ ಜೊತೆಗೂಡಿ ಸಮಾಜಮುಖಿ ಕಾರ್ಯಗಳನ್ನು ಕೈಗೊಂಡ ಹೆಮ್ಮೆ ಅವರದು ಎಂದು ವಿಶುಕುಮಾರ್ ಅವರು ಸ್ಮರಿಸಿದ್ದಾರೆ.

90 ವರ್ಷಗಳ ಕಾಲ ಜೀವಿಸಿದ್ದ ಅವರು ಪತ್ರಿಕೋದ್ಯಮ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದರು. ಪ್ರಜಾವಾಣಿ ಮತ್ತು ಸುಧಾ ಪತ್ರಿಕೆಗಳಿಗೆ ದಶಕಗಳ ಕಾಲ ಸಂಪಾದಕರಾಗಿದ್ದರು.

ದೇಹವನ್ನು ಎಂ.ಎಸ್. ರಾಮಯ್ಯ ಆಸ್ಪತ್ರೆಗೆ ದಾನ ಮಾಡಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ವ್ಯಕ್ತಿಪರಿಚಯ:**

ಎಂ.ಬಿ. ಸಿಂಗ್ ಅವರ ಪೂರ್ಣ ಹೆಸರು ಮದನ ಭುವನ ಸಿಂಗ್, 24-05-1925 ರಂದು ಮೈಸೂರಿನಲ್ಲಿ ಜನನ. ಮಾತೃಭೂಮಿ ಪತ್ರಿಕೆಯ ಮೂಲಕ ಪತ್ರಿಕೋದ್ಯಮಕ್ಕೆ ಪಾದಾರ್ಪಣೆ. ಸಾಂಸ್ಕೃತಿಕ ರಾಜಧಾನಿಯಿಂದ ರಾಜಕೀಯದ ರಾಜಧಾನಿ ಬೆಂಗಳೂರಿಗೆ ಕಾಲಿಟ್ಟ ಅವರು ವಾರ್ತಾ ಪತ್ರಿಕೆ ಮೂಲಕ ಉದ್ಯೋಗ ಆರಂಭಿಸಿ ವಿಶ್ವ ಕರ್ನಾಟಕದಲ್ಲಿ ಸಹ ಕಾರ್ಯ ನಿರ್ವಹಿಸಿದ್ದರು. ಡೆಕ್ಕನ್‌ಹೆರಾಲ್ಡ್, ಪ್ರಜಾವಾಣಿ ಆರಂಭವಾದ ಹೊಸತರಲ್ಲಿ ಅಂದಿನ ಸಂಪಾದಕರಾಗಿದ್ದ ಪುಟ್ಟಸ್ವಾಮಯ್ಯ ಅವರ ಕರೆಯ ಮೇರೆಗೆ 1953 ರಲ್ಲಿ ಪ್ರಜಾವಾಣಿ ಪತ್ರಿಕೆಯ ಸಾಹಚರ್ಯ. 35 ವರ್ಷಗಳ ನಿರಂತರ ಕಾರ್ಯ ನಿರ್ವಹಣೆ. ಟಿಯೆಸ್ಸಾರ್ ಪತ್ರಿಕೋದ್ಯಮ ಪ್ರಶಸ್ತಿ,ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಹಲವು ಸಂಘ ಸಂಸ್ಥೆಗಳ ಪ್ರಶಸ್ತಿಗಳು ಇವರಿಗೆ ಸಂದಿವೆ.